ಪ್ಯಾರಾ ಮೆಡಿಕಲ್ ವರ್ಕರ್ಸ್ ನೇಮಕಾತಿ

723(764) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ):ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ಯಾರಾ ಮೆಡಿಕಲ್ ವರ್ಕರ್ಸ್ ಹುದ್ದೆಗಳನ್ನು ಭರ್ತಿಮಾಡಲು 1992, 94, ಹಾಗೂ 97 ರಲ್ಲಿ ಅರ್ಜಿಗಳನ್ನು ಕರೆಯಲಾಗಿತ್ತೇ?

ಆ) ಹಾಗಿದ್ದಲ್ಲಿ ಎಷ್ಟು ಹುದ್ದೆಗಳ ಭರ್ತಿಗಾಗಿ ಅರ್ಜಿಗಳನ್ನು ಕರೆಯಲಾಗಿತ್ತು?

ಇ) ಈ ಹುದ್ದೆಗಳಿಗೆ ಎಷ್ಟು ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು?

ಈ) ಈ ಹುದ್ದೆಗಳಿಗೆ ಸಂದರ್ಶನವನ್ನು ಯಾವಾಗ ಏರ್ಪಡಿಸಲಾಗಿತ್ತು?

ಉ) ಇಲ್ಲದಿದ್ದಲ್ಲಿ, ಇದಕ್ಕೆ ಕಾರಣಗಳೇನು?

ಊ) ಈ ಹುದ್ದೆಗಳಿಗಾಗಿ ಅರ್ಜಿದಾರರಿಂದ ಪೋಸ್ಟಲ್ ಆರ್ಡರ್‌ಗಳನ್ನು ಪಡೆಯಲಾಗಿತ್ತೇ?

ಋ) ಹಾಗಿದ್ದಲ್ಲಿ ಹುದ್ದೆಗಳನ್ನು ಭರ್ತಿ ಮಾಡದಿದ್ದಲ್ಲಿ ಪೋಸ್ಟಲ್ ಆರ್ಡರ್ ಹಣವನ್ನು ವಾಪಸ್ಸು ಮಾಡಲಾಗಿದೆಯೆ?

ಡಾ॥ ಎ. ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) 1997 ರಲ್ಲಿ ಕರೆಯಲಾಗಿತ್ತು.

ಆ) 138 ಹುದ್ದೆಗಳಿಗೆ

ಇ) 51,000 ಅಭ್ಯರ್ಥಿಗಳು

ಈ) ಸಂದರ್ಶನ ಏರ್ಪಡಿಸಲಾಗಿರುವುದಿಲ್ಲ

ಉ) ಅರ್ಹತೆಪಡೆಯಲು ನಿಗದಿ ಪಡಿಸಿದ ಪರೀಕ್ಷೆಗಳಲ್ಲಿ ಪಡೆದ ಅಂಕಗಳ ಆಧಾರದ ಮೇಲೆ, ವಿಶೇಷ ನೇಮಕಾತಿ ನಿಯಮಗಳನ್ನು ರಚಿಸಿ ಸದರಿ ಹುದ್ದೆಗಳನ್ನು ಭರ್ತಿ ಮಾಡುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಊ) ಹೌದು

ಋ) ಇಲ್ಲ.

ಬೆಂಗಳೂರು ನಗರದಲ್ಲಿ ಮೂತ್ರ ಪಿಂಡ ಮಾರಾಟವನ್ನು ತಡೆಗಟ್ಟುವುದು

724 (765) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ): ಮಾನ್ಯ ಆರೋಗ್ಯ ಮತ್ತುಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಭಾವನಾತ್ಮಕವಾಗಿ ಸಂಬಂಧಪಟ್ಟ ವ್ಯಕ್ತಿಗಳು ಮೂತ್ರಪಿಂಡ ದಾನ ಮಾಡಬಹುದು ಎಂಬ ಕಲಮನ್ನು ದುರುಪಯೋಗ ಪಡಿಸಿಕೊಂಡು ಖಾಸಗೀ ಆಸ್ಪತ್ರೆಗಳಲ್ಲಿ ಮೂತ್ರಪಿಂಡ ಜೋಡಣೆ ಶಸ್ತ್ರ ಚಿಕಿತ್ಸೆ ಗಮನಕ್ಕೆ ಬಂದಿದೆಯೆ;